ಕರ್ನಾಟಕ ಲೋಕಸೇವಾ ಆಯೋಗ

ಸಂಖ್ಯೆ: ಗೋಪ್ಯ(1)1567/2026-27/ಪಿಎಸ್‌ಸಿ

ಲೋಕಸೇವಾ ಆಯೋಗದ ಕಚೇರಿ,
" ಉದ್ಯೋಗ ಸೌಧ ",
ಬೆಂಗಳೂರು, ದಿನಾಂಕ: 16-11-2026.

ಪ್ರಕಟಣೆ

ವಿಷಯ: 2026-27ನೇ ಸಾಲಿನ ಗೆಜ಼ೆಟೆಡ್ ಪ್ರೊ ಷನರ್ಸ್ 319 (297+22 ಹೈ.ಕ.) ಹುದ್ದೆಗಳ ಪೂರ್ವಭಾವಿ ಪರೀಕ್ಷೆಯ ನೇಮಕಾತಿಗೆ ಸಂಬಂಧಿಸಿದಂತೆ ನಡೆಸಿದ ಸ್ಪರ್ಧಾತ್ಮಕ ಪರೀಕ್ಷೆಗಳ ಪತ್ರಿಕೆ-1 ಮತ್ತು ಪತ್ರಿಕೆ-2ರ ಕೀ-ಉತ್ತರಗಳನ್ನು ಪ್ರಕಟಿಸುವ ಬಗ್ಗೆ.

******

ಆಯೋಗದ ಅಧಿಸೂಚನೆ ಸಂಖ್ಯೆ:KPSCKA/EXA1/EXMF/9/2026-EXAM-1/I/251710/2026, ದಿನಾಂಕ:31-07-2026ರನ್ವಯ ಅಧಿಸೂಚಿಸಿರುವ 2026-27ನೇ ಸಾಲಿನ ಗೆಜ಼ೆಟೆಡ್ ಪ್ರೊಬೇಷನರ್ಸ್ 319 (297+22 ಹೈ.ಕ.) ಹುದ್ದೆಗಳ ಪೂರ್ವಭಾವಿ ಪರೀಕ್ಷೆಯನ್ನು ಬೆಂಗಳೂರು ಸೇರಿದಂತೆ ಒಟ್ಟು 15 ಜಿಲ್ಲಾ ಕೇಂದ್ರಗಳಲ್ಲಿ ದಿನಾಂಕ:15-11-2026ರಂದು ನಡೆಸಲಾಗಿದ್ದು, ಪತ್ರಿಕೆ-1 ಮತ್ತು ಪತ್ರಿಕೆ-2 ಕೀ-ಉತ್ತರಗಳನ್ನು ಆಯೋಗದ ವೆಬ್‌ಸೈಟ್‌ನಲ್ಲಿ ಅಭ್ಯರ್ಥಿಗಳ ಮಾಹಿತಿಗಾಗಿ ದಿನಾಂಕ:16.11.2026 ರಂದು ಪ್ರಕಟಿಸಲಾಗಿರುತ್ತದೆ.

ಪ್ರಕಟಿತ ಕೀ-ಉತ್ತರಗಳಿಗೆ ಆಕ್ಷೇಪಣೆಗಳಿದ್ದಲ್ಲಿ, ಅಭ್ಯರ್ಥಿಗಳು ಆಯೋಗದ ವೆಬ್‌ಸೈಟ್‌ನಲ್ಲಿ ಒದಗಿಸಲಾದ ಆನ್‌ಲೈನ್ ಪೋರ್ಟಲ್ https://cetonline.karnataka.gov.in/kpscobjection/forms/login.aspx ಮೂಲಕ ದಿನಾಂಕ:19.11.2026ರ ಬೆಳಿಗ್ಗೆ 10:30 ಗಂಟೆಯೊಳಗೆ ಸಲ್ಲಿಸಬಹುದಾಗಿರುತ್ತದೆ.

ಆಕ್ಷೇಪಣೆಗಳನ್ನು ಸಲ್ಲಿಸುವ ಸಂದರ್ಭದಲ್ಲಿ ಪತ್ರಿಕೆಯ ವಿವರ, ಪ್ರಶ್ನೆಪತ್ರಿಕೆ ವರ್ಷನ್ ಕೋಡ್, ಪ್ರಶ್ನೆ ಸಂಖ್ಯೆ ಹಾಗೂ ಪೂರಕ ದಾಖಲೆಗಳನ್ನು PDF (1 MBಗೆ ಸೀಮಿತವಾಗಿರುತ್ತದೆ) ರೂಪದಲ್ಲಿ ಸಲ್ಲಿಸಬೇಕು. ಸಲ್ಲಿಸಲಾಗುವ ಪ್ರತಿ ಆಕ್ಷೇಪಣೆಗೆ ರೂ.50/-ನ್ನು ಪಾವತಿಸತಕ್ಕದ್ದು ಹಾಗೂ ಆಕ್ಷೇಪಣಾ ಶುಲ್ಕವನ್ನು ಹಿಂದಿರುಗಿಸಲಾಗುವುದಿಲ್ಲ. ಅಪೂರ್ಣ/ ಆಧಾರರಹಿತವಾಗಿರುವ ಹಾಗೂ ಶುಲ್ಕ ಪಾವತಿಸದ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.

ವಿಷಯ ತಜ್ಞರ ಸಮಿತಿಯು ಆಕ್ಷೇಪಣೆಗಳನ್ನು ಪರಿಶೀಲಿಸಿ, ತೀರ್ಮಾನಿಸುವ ಕೀ-ಉತ್ತರಗಳು ಅಂತಿಮವಾಗಿರುತ್ತದೆ.

ಸಹಿ/-
ಪರೀಕ್ಷಾ ನಿಯಂತ್ರಕರು,
ಕರ್ನಾಟಕ ಲೋಕಸೇವಾ ಆಯೋಗ,
ಬೆಂಗಳೂರು.

ಸೂಚನೆ: ಆಫ್-ಲೈನ್ ಮೂಲಕ ಸಲ್ಲಿಸುವ ಆಕ್ಷೇಪಣೆಗಳನ್ನು ಪರಿಗಣಿಸಲಾಗುವುದಿಲ್ಲ.